ಆ) ಮೇಲ್ಕಂಡ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ಶಿವಮೊಗ್ಗ ವಿಭಾಗ ವ್ಯಾಪ್ತಿಯಿಂದ ನಿರ್ವಹಣೆ ಮಾಡಲಾಗುತ್ತಿದೆ.

ಇ) ಇವುಗಳ ರಿಪೇರಿಯನ್ನು (ದುರಸ್ತಿ) ಲೋಕೋಪಯೋಗಿ ಇಲಾಖೆ ಶಿವಮೊಗ್ಗ ವಿಭಾಗ ವ್ಯಾಪ್ತಿಯಿಂದ ಮಾಡಲಾಗುತ್ತಿದೆ.

ಈ) ಮೂರು ರಾಜ್ಯ ಹೆದ್ದಾರಿ ಸಂಖ್ಯೆ : 68, 57,25ನ್ನು ಮೂರು ವರ್ಷದ ವಾರ್ಷಿಕ ನಿರ್ವಹಣೆ(2005–2008) ಯೋಜನೆ ಅಡಿಯಲ್ಲಿ ಕಾಮಗಾರಿಯನ್ನು ನಿರ್ವಹಣೆ ಮಾಡಲಾಗುವುದು. ಉಳಿದ 2 ಜಿಲ್ಲಾ ಮುಖ್ಯ ರಸ್ತೆಗಳನ್ನು 2005–06ನೇ ಸಾಲಿನ ಲೆಕ್ಕ ಶೀರ್ಷಿಕೆ 3054ರ ಅಡಿಯಲ್ಲಿ ದುರಸ್ತಿ ಕಾಮಗಾರಿ ನಿರ್ವಹಿಸಲಾಗುತ್ತಿದೆ.

5261(5959)ಶ್ರೀ ಹಾಲಪ್ಪ ಹೆಚ್(ಹೊಸನಗರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಲೋಕೋಪಯೋಗಿ ಇಲಾಖೆಯಲ್ಲಿ ತಾಂತ್ರಿಕ ವಿದ್ಯಾರ್ಹತೆ ಹೊಂದಿ ಅನುಕಂಪ ಆಧಾರವಲ್ಲಿ ಪ್ರಥಮ ದರ್ಜೆ/ದ್ವಿತೀಯ ದರ್ಜೆ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಸಹಾಯಕ/ಕಿರಿಯ ಸಹಾಯಕ ಇಂಜಿನಿಯರ್‌ಗಳಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದಲ್ಲಿ, ಈ ಹುದ್ದೆಗಳು ಅವರ ವಿದ್ಯಾರ್ಹತೆಗೆ ಅನುಗುಣವಾಗಿದೆಯೇ? (ವಿವರ ನೀಡುವುದು).

ಶ್ರೀ ಹೆಚ್.ಡಿ. ರೇವಣ್ಣ(ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ನಿಯಮಗಳಲ್ಲಿ ಅವಕಾಶ ಇಲ್ಲದೆ ಇರುವುದರಿಂದ, ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಆ) ಕರ್ನಾಟಕ ನಾಗರೀಕ ಸೇವಾ (ಅನುಕಂಪ ಆಧಾರದ ಮೇಲೆ ನೇಮಕಾರಿ) ನಿಯಮಗಳು, 1996ರನ್ವಯ ಅನುಕಂಪದ ಆಧಾರದ ಮೇಲೆ ಪ್ರಥಮ ದರ್ಜೆ ಸಹಾಯಕ, ದ್ವಿತೀಯ ದರ್ಜೆ ಸಹಾಯಕ ಹಾಗೂ ಗ್ರೂಪ್–ಡಿ ಹುದ್ದೆಗಳಿಗೆ ಮಾತ್ರ ನೇಮಕ ಮಾಡಲು ಅವಕಾಶವಿದೆ. ತಾಂತ್ರಿಕ ವಿದ್ಯಾರ್ಹತೆ ಹೊಂದಿದ್ದರೂ, ಮೇಲಿನ ನಿಯಮಗಳನ್ವಯ ಪ್ರ.ದ. ಸಹಾಯಕ/ದ್ವಿ.ದ.ಸಹಾಯಕ ಹುದ್ದೆಗಳಿಗೆ ನೇಮಕಗೊಂಡ ಅಭ್ಯರ್ಥಿಗಳನ್ನು ಸಹಾಯಕ/ಕಿರಿಯ ಇಂಜಿನಿಯರ್ ಹುದ್ದೆಗಳಿಗೆ ಮೇಲ್ದರ್ಜೆಗೇರಿಸಲು ಯಾವುದೇ ನಿಯಮಗಳಲ್ಲಿ ಅವಕಾಶವಿಲ್ಲ. ಆದಕಾರಣ, ಮೇಲ್ದರ್ಜೆಗೆ ಏರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

5262(6124) ಶ್ರೀ ಹಾಲಪ್ಪ ಹೆಚ್. (ಹೊಸನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕಳೆದ ಮೂರು ವರ್ಷಗಳಿಂದ ಶಿವಮೊಗ್ಗ ಜಿಲ್ಲಾ ಪಂಚಾಯ್ತಿಯಲ್ಲಿ ವಿವಿಧ ಯೋಜನೆಯಡಿಯಲ್ಲಿ ನಿರ್ಮಿಸಿದ ರಸ್ತೆಗಳೆಷ್ಟು ಮತ್ತು ರಸ್ತೆ ಕಾಮಗಾರಿಗಳಿಗೆ ವ್ಯಯಿಸಿದ ಹಣವೆಷ್ಟು: (ನಬಾರ್ಡ್ ಮತ್ತು ಪಿ.ಎಂ.ಜಿ.ಎಸ್.ವೈ ಬಿಟ್ಟು)

ಆ) ವಿವಿಧ ಯೋಜನೆಗಳಡಿ ನಿರ್ಮಿಸಲಾದ ಹೊಸ ರಸ್ತೆಗಳು ಯಾವುವು, ಅವುಗಳ ಉದ್ದವೆಷ್ಟು(ನಬಾರ್ಡ್ ಮತ್ತು ಪಿ.ಎಂ.ಜಿ.ಎಸ್.ವೈ ಬಿಟ್ಟು):